All India Radio: Bangalore
National Bulletin In Kannada
21.04.2025 19.35 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಪೋಪ್ ಫ್ರಾನ್ಸಿಸ್ ನಿಧನಕ್ಕೆ ವಿಶ್ವದ ನಾಯಕರ ಸಂತಾಪ
- ಸೌದಿ ಅರೇಬಿಯಾದ ಜೆಡ್ಡಾಗೆ ನಾಳೆ ಪ್ರಧಾನಿ ನರೇಂದ್ರ ಮೋದಿ ಭೇಟಿ
- ವೇವ್ಸ್ ಅನಿಮೆ, ಮಂಗಾ ಸ್ಪರ್ಧೆಯ ಅಂತಿಮ ಸುತ್ತಿಗೆ ಸ್ಪರ್ಧಿಗಳ ಆಯ್ಕೆ
- ಐಪಿಎಲ್ ಟಿ-೨೦ ಕ್ರಿಕೆಟ್; ಗುಜರಾತ್ ಟೈಟಾನ್ಸ್ ವಿರುದ್ಧ ಟಾಸ್ ಗೆದ್ದ ಕೊಲ್ಕತ್ತಾ ನೈಟ್ ರೈಡರ್ಸ್ ಫೀಲ್ಡಿಂಗ್ ಆಯ್ಕೆ

****************

ರೋಮನ್ ಕ್ಯಾಥೋಲಿಕ್ ಚರ್ಚ್ ಪ್ರಧಾನ ಧರ್ಮ ಗುರು ಪೋಪ್ ಫ್ರಾನ್ಸಿಸ್ ಅವರು ಇಂದು ನಿಧನರಾಗಿದ್ದಾರೆ. ಅವರಿಗೆ ೮೮ ವರ್ಷ ವಯಸ್ಸಾಗಿತ್ತು. ಕ್ರೈಸ್ತ ಧರ್ಮದ ಪ್ರಮುಖ ಆಧ್ಯಾತ್ಮಿಕ ನಾಯಕರಾಗಿದ್ದ ಅವರು, ವಿಶ್ವಾದ್ಯಂತ ಅನೇಕ ಭಕ್ತರಿಗೆ ಮಾರ್ಗದರ್ಶಕರಾಗಿದ್ದರು.

ಪೋಪ್ ಫ್ರಾನ್ಸಿಸ್ ಅವರ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ವಿಶ್ವಾದ್ಯಂತ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

ಪೋಪ್ ಫ್ರಾನ್ಸಿಸ್ ಅವರನ್ನು ಪ್ರಪಂಚದಾದ್ಯಂತ ಲಕ್ಷಾಂತರ ಜನರು ಕರುಣೆ, ನಮ್ರತೆ ಮತ್ತು ಆಧ್ಯಾತ್ಮಿಕ ಧೈರ್ಯದ ಸಂಕೇತವಾಗಿ ಸ್ಮರಿಸುತ್ತಾರೆ. ಅವರು ಬಡವರು ಮತ್ತು ದೀನದಲಿತರಿಗೆ ಶ್ರದ್ಧೆಯಿಂದ ಸೇವೆ ಸಲ್ಲಿಸುವುದರ ಜೊತೆಗೆ ದೀನರಿಗೆ ಭರವಸೆಯ ಚೈತನ್ಯವನ್ನು ತುಂಬಿದವರು. ಭಾರತದ ಜನರ ಮೇಲೆ ಪೋಪ್ ಫ್ರಾನ್ಸಿಸ್ ಅವರ ವಾತ್ಸಲ್ಯ ಸದಾ ಸ್ಮರಣೀಯ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

****************

ಕೇಂದ್ರ ಸರ್ಕಾರ ಜಾರಿಗೆ ತರುತ್ತಿರುವ ನೀತಿಗಳು ಮುಂದಿನ ಸಾವಿರ ವರ್ಷಗಳ ಭವಿಷ್ಯವನ್ನು ರೂಪಿಸಲಿವೆ. ಈ ದೃಷ್ಟಿಕೋನದಿಂದ ರಾಷ್ಟ್ರದ ಸೇವೆಯನ್ನು ತಮ್ಮ ಸರ್ವೋತ್ತಮ ಕರ್ತವ್ಯವೆಂದು ಭಾವಿಸಿ ಕಾರ್ಯ ನಿರ್ವಹಿಸಬೇಕೆಂದು ಪ್ರಧಾನಿ ನರೇಂದ್ರ ಮೋದಿ ಎಲ್ಲ ಸರ್ಕಾರಿ ನೌಕರರಿಗೆ ಕರೆ ನೀಡಿದ್ದಾರೆ.

೧೭ನೇ ನಾಗರಿಕ ಸೇವೆಗಳ ದಿನದ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿ ಇಂದು ಸಾರ್ವಜನಿಕ ಆಡಳಿತದಲ್ಲಿ ಉತ್ಕೃಷ್ಟತೆಗಾಗಿ ಪ್ರಧಾನ ಮಂತ್ರಿಗಳ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

ಬಳಿಕ ಸರ್ಕಾರಿ ನೌಕರರನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಎಲ್ಲ ಸರ್ಕಾರಿ ನೌಕರರು ಪ್ರಜಾಪ್ರಭುತ್ವದ ಹಾದಿಯಲ್ಲಿ ಆಡಳಿತವನ್ನು ನಡೆಸಿ, ನಿಷ್ಠಾವಂತರಾಗಿ ಸಮರ್ಪಣಾ ಭಾವದೊಂದಿಗೆ ಕಾರ್ಯನಿರ್ವಹಿಸಬೇಕು. ದೇಶದ ಮಹತ್ವಾಕಾಂಕ್ಷಿ ಗುರಿಗಳ ಸಾಧನೆಗೆ ಹಗಲು-ರಾತ್ರಿ ಶ್ರಮವಹಿಸಬೇಕು ಎಂದು ಸರ್ದಾರ್ ವಲ್ಲಭಬಾಯಿ ಪಟೇಲ್ ಹೇಳಿದ್ದರು. ಅವರ ಈ ಮಾತುಗಳು ಇಂದು ನಾವೆಲ್ಲರೂ ವಿಕಸಿತ ಭಾರತದ ಗುರಿಯ ಸಂಕಲ್ಪದೊಂದಿಗೆ ಮುನ್ನಡೆಯುತ್ತಿರುವ ಸಂದರ್ಭದಲ್ಲಿ ಪ್ರಸ್ತುತವಾಗಿವೆ ಎಂದರು.

ಧ್ವನಿ: ಪ್ರಧಾನಿ

ಇದೇ ವೇಳೆ ಅವರು ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರಿಗೆ ಗೌರವ ನಮನ ಸಲ್ಲಿಸಿದರು. ದೇಶದ ಯುವಕರು, ರೈತರು ಮತ್ತು ಮಹಿಳೆಯರು ದೊಡ್ಡ ಕನಸುಗಳನ್ನು ಕಾಣುತ್ತಿದ್ದು, ಅವರ ಆಕಾಂಕ್ಷೆಗಳನ್ನು ಈಡೇರಿಸಲು ಸರ್ಕಾರ ವೇಗವಾಗಿ ಕಾರ್ಯನಿರ್ವಹಿಸುವ ಅಗತ್ಯವಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಈ ವರ್ಷ, ಜಿಲ್ಲೆಗಳ ಸಮಗ್ರ ಅಭಿವೃದ್ಧಿ, ಮಹತ್ವಾಕಾಂಕ್ಷೆಯ ಬ್ಲಾಕ್‌ಗಳ ಕಾರ್ಯಕ್ರಮ ಮತ್ತು ನಾವೀನ್ಯತೆ ವಿಭಾಗಗಳಲ್ಲಿ ಒಟ್ಟು ೧೪ ಪ್ರಶಸ್ತಿಗಳನ್ನು ಸರ್ಕಾರಿ ನೌಕರರಿಗೆ ಅವರು ಪ್ರದಾನ ಮಾಡಿದರು.

ಸರ್ಕಾರಿ ನೌಕರರು ನಾಗರಿಕರ ಹಿತದೃಷ್ಟಿಯಿಂದ ತಮ್ಮನ್ನು ತಾವು ಅರ್ಪಿಸಿಕೊಳ್ಳಲು, ಸಾರ್ವಜನಿಕ ಸೇವೆಗೆ ಬದ್ಧರಾಗಿರಲು ಮತ್ತು ತಮ್ಮ ಕೆಲಸದಲ್ಲಿ ಶ್ರೇಷ್ಠತೆಯತ್ತ ಶ್ರಮಿಸಲು ನಾಗರಿಕ ಸೇವೆಗಳ ದಿನ ಒಂದು ಸಂದರ್ಭವಾಗಿದೆ. ೧೯೪೭ ರಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಆಡಳಿತ ಸೇವಾ ಅಧಿಕಾರಿಗಳ ಪ್ರಶಿಕ್ಷಣಾರ್ಥಿಗಳನ್ನುದ್ದೇಶಿಸಿ ಮಾತನಾಡಿದ ದಿನದ ಸ್ಮರಣಾರ್ಥ ಈ ದಿನವನ್ನು ಆಚರಿಸಲಾಗುತ್ತದೆ.

***************

ಪ್ರಧಾನಿ ನರೇಂದ್ರ ಮೋದಿ ನಾಳೆ ಸೌದಿ ಅರೇಬಿಯಾದ ಜೆಡ್ಡಾಗೆ ಭೇಟಿ ನೀಡಲಿದ್ದಾರೆ.

೪ ದಶಕಗಳ ನಂತರ ಭಾರತೀಯ ನಾಯಕರೊಬ್ಬರು ಸೌದಿ ಅರೇಬಿಯಾದ ವಾಣಿಜ್ಯ ಕೇಂದ್ರಕ್ಕೆ ಭೇಟಿ ನೀಡುತ್ತಿರುವುದು ಇದೇ ಮೊದಲು. ಪ್ರವಾಸದ ಸಮಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಅಲ್ಲಿನ ಕಾರ್ಖಾನೆಗೆ ಭೇಟಿ ನೀಡಿ, ಭಾರತೀಯ ಕಾರ್ಮಿಕರೊಂದಿಗೆ ಸಂವಾದ ನಡೆಸಲಿದ್ದಾರೆ.

ಇತ್ತೀಚಿನ ವರ್ಷಗಳಲ್ಲಿ ಸೌದಿ ಅರೇಬಿಯಾದಲ್ಲಿ ಭಾರತದ ಹೂಡಿಕೆ ಗಣನೀಯವಾಗಿ ಏರಿಕೆಯಾಗಿದೆ.

೨೦೨೩-೨೪ರ ಹಣಕಾಸು ವರ್ಷದಲ್ಲಿ ದ್ವಿಪಕ್ಷೀಯ ವ್ಯಾಪಾರ ಅಧಿಕವಾಗಿದ್ದು, ಸೌದಿ ಅರೇಬಿಯಾದಿಂದ ಭಾರತಕ್ಕೆ ಆಮದು ೩೧.೪೨ ಬಿಲಿಯನ್ ಅಮೆರಿಕನ್ ಡಾಲರ್‌ಗಳಷ್ಟಾಗಿದ್ದು, ಸೌದಿ ಅರೇಬಿಯಾಗೆ ಭಾರತದಿಂದ ಮಾಡಲಾದ ರಫ್ತು ಪ್ರಮಾಣ ೧೧.೫೬ ಬಿಲಿಯನ್ ಅಮೆರಿಕನ್ ಡಾಲರ್‌ಗಳಷ್ಟಿತ್ತು.

ಭಾರತದಿಂದ ರಫ್ತು ಮಾಡುವ ಪ್ರಮುಖ ವಸ್ತುಗಳಲ್ಲಿ ಅಕ್ಕಿ, ಪೆಟ್ರೋಲಿಯಂ ಉತ್ಪನ್ನಗಳು, ರಾಸಾಯನಿಕಗಳು, ಜವಳಿ, ಆಹಾರ ಉತ್ಪನ್ನಗಳು ಮತ್ತು ಪಿಂಗಾಣಿ ಟೈಲ್ಸ್ ಸೇರಿವೆ. ಭಾರತ ಕಚ್ಚಾತೈಲ, ಎಲ್‌ಪಿಜಿ ರಸಗೊಬ್ಬರಗಳು ಮತ್ತು ಪ್ಲಾಸ್ಟಿಕ್ ಉತ್ಪನ್ನಗಳನ್ನು ಆಮದು ಮಾಡಿಕೊಳ್ಳುತ್ತಿದೆ.

ಎರಡೂ ದೇಶಗಳ ನಡುವೆ ಬಂಡವಾಳ ಹೂಡಿಕೆ ಹರಿವು ಹೆಚ್ಚಾಗಿದೆ. ಸೌದಿ ಅರೇಬಿಯಾದಲ್ಲಿ ಭಾರತೀಯ ಹೂಡಿಕೆ ಇತ್ತೀಚಿನ ವರ್ಷಗಳಲ್ಲಿ ಮೂರು ಬಿಲಿಯನ್ ಅಮೆರಿಕನ್ ಡಾಲರ್ ತಲುಪಿದೆ.

ಈ ಹೂಡಿಕೆಗಳು ನಿರ್ಮಾಣ ಯೋಜನೆಗಳು, ನಿರ್ವಹಣೆ ಮತ್ತು ಸಮಾಲೋಚನಾ ಸೇವೆಗಳು, ದೂರ ಸಂಪರ್ಕಗಳು, ಮಾಹಿತಿ ತಂತ್ರಜ್ಞಾನ, ಹಣಕಾಸು ಸೇವೆಗಳು, ಸಾಫ್ಟ್‌ವೇರ್ ಅಭಿವೃದ್ಧಿ ಇತ್ಯಾದಿ ಕ್ಷೇತ್ರಗಳಿಗೆ ಸಂಬಂಧಿಸಿದ್ದಾಗಿವೆ.

***************

ನಾಲ್ಕು ದಿನಗಳ ಅಧಿಕೃತ ಭಾರತ ಭೇಟಿಗಾಗಿ ನವದೆಹಲಿಗೆ ಆಗಮಿಸಿರುವ ಅಮೆರಿಕ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ಅವರಿಗೆ ಇಂದು ಸಾಂಪ್ರದಾಯಿಕ ಸ್ವಾಗತ ಕೋರಲಾಯಿತು. ಇದೇ ವೇಳೆ ಅವರಿಗೆ ಗೌರವ ರಕ್ಷೆ ನೀಡಲಾಯಿತು.

ಇಂದು ಬೆಳಗ್ಗೆ ನವದೆಹಲಿ ವಿಮಾನನಿಲ್ದಾಣಕ್ಕೆ ಆಗಮಿಸಿದ ಅವರನ್ನು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಬರಮಾಡಿಕೊಂಡರು.

ಜೆ.ಡಿ.ವ್ಯಾನ್ಸ್ ಅವರೊಂದಿಗೆ ಅವರ ಪತ್ನಿ ಉಷಾ ವ್ಯಾನ್ಸ್ ಕೂಡ ಆಗಮಿಸಿದರು. ಬಳಿಕ ಅವರು, ರಾಷ್ಟ್ರ ರಾಜಧಾನಿಯಲ್ಲಿರುವ ಅಕ್ಷರ್‌ಧಾಮ್ ಮಂದಿರಕ್ಕೆ ಭೇಟಿ ನೀಡಿದರು.

ಕಳೆದ ಫೆಬ್ರವರಿ ೧೩ ರಂದು ಪ್ರಧಾನಿ ನರೇಂದ್ರ ಮೋದಿ ಅವರ ಅಮೆರಿಕ ಭೇಟಿಯ ಸಂದರ್ಭದಲ್ಲಿ ಹೊರಡಿಸಲಾದ ಭಾರತ-ಅಮೆರಿಕ ಜಂಟಿ ಹೇಳಿಕೆಯ ಫಲಿತಾಂಶಗಳ ಅನುಷ್ಠಾನದ ಕುರಿತಂತೆ ಪ್ರಧಾನಿ ಮೋದಿ ಹಾಗೂ ಅಮೆರಿಕಾ ಉಪಾಧ್ಯಕ್ಷರು ಚರ್ಚೆ ನಡೆಸುವ ಸಾಧ್ಯತೆ ಇದೆ.

ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಕುರಿತು ಉಭಯ ನಾಯಕರು ಚರ್ಚಿಸಲಿದ್ದಾರೆ. ಜೆ.ಡಿ.ವ್ಯಾನ್ಸ್ ಭಾರತಕ್ಕೆ ನೀಡಿರುವ ಮೊದಲ ಭೇಟಿ ಇದಾಗಿದೆ.

***************

ಪ್ರಾದೇಶಿಕ ಸ್ಪರ್ಧೆಗಳ ನಂತರ, ಭಾರತದಾದ್ಯಂತ ೧೧ ನಗರಗಳಿಂದ ಅಂತಿಮ ಸ್ಪರ್ಧಿಗಳನ್ನು ವೇವ್ಸ್ ಅನಿಮೆ ಮತ್ತು ಮಂಗಾ ಸ್ಪರ್ಧೆಯ ರಾಷ್ಟ್ರೀಯ ಮಟ್ಟದ ಅಂತಿಮ ಸುತ್ತಿನಲ್ಲಿ ಭಾಗವಹಿಸಲು ಆಯ್ಕೆ ಮಾಡಲಾಗಿದೆ.

ಮೇ ೧ ರಿಂದ ೪ ರವರೆಗೆ ಮುಂಬೈನ ಜಿಯೋ ವರ್ಲ್ಡ್ ಕನ್ವೆನ್ಷನ್ ಸೆಂಟರ್‌ನಲ್ಲಿ ವಿಶ್ವ ಶ್ರವಣ, ದೃಶ್ಯ ಮತ್ತು ಮನರಂಜನಾ ಶೃಂಗಸಭೆ-ವೇವ್ಸ್ ೨೦೨೫ ರಲ್ಲಿ ಈ ಅಂತಿಮ ಸ್ಪರ್ಧೆಗಳು ನಡೆಯಲಿವೆ.

W◌ಂಬ ಅನ್ನು ಭಾರತ ಮಾಧ್ಯಮ ಮತ್ತು ಮನರಂಜನಾ ಸಂಘ ಆಯೋಜಿಸಿದೆ. ಇದು ವೇವ್ಸ್ ಭಾಗವಾಗಿ ಭಾರತ ಸರ್ಕಾರದ ವಾರ್ತಾ ಮತ್ತು ಪ್ರಸಾರ ಸಚಿವಾಲಯದಿಂದ ಬೆಂಬಲಿತವಾಗಿದೆ.

ಅನಿಮೇಷನ್, ವಿಷುಯಲ್ ಎಫೆಕ್ಟ್ಸ್, ಗೇಮಿಂಗ್, ಕಾಮಿಕ್ಸ್ ಮತ್ತು ವಿಸ್ತೃತ ರಿಯಾಲಿಟಿಗಾಗಿ ವೇವ್ಸ್ ಭಾರತದ ಅತಿದೊಡ್ಡ ವೇದಿಕೆಯಾಗಿದೆ.

ಸುಮಾರು ೧ ಲಕ್ಷ ನೋಂದಣಿಗಳೊಂದಿಗೆ ಕ್ರಿಯೇಟ್ ಇನ್ ಇಂಡಿಯಾ ಚಾಲೆಂಜ್ ಇತಿಹಾಸ ನಿರ್ಮಿಸಿದೆ. ಇದರಲ್ಲಿ ೧ ಸಾವಿರದ ೧೦೦ ಅಂತಾರಾಷ್ಟ್ರೀಯ ಸ್ಪರ್ಧಿಗಳು ಸೇರಿದ್ದಾರೆ. ಆಯ್ಕೆ ಪ್ರಕ್ರಿಯೆಯ ನಂತರ ೭೫೦ಕ್ಕೂ ಹೆಚ್ಚು ಅಂತಿಮ ಸ್ಪರ್ಧಿಗಳನ್ನು ಆಯ್ಕೆ ಮಾಡಲಾಗಿದೆ.

****************

ಪಶ್ಚಿಮ ಬಂಗಾಳದ ಮುರ್ಷಿದಾಬಾದ್ ಜಿಲ್ಲೆಯಲ್ಲಿನ ಸಂಶೇರ್ ಗಂಜ್‌ನ ವಕ್ಫ್ ತಿದ್ದುಪಡಿ ಕಾಯ್ದೆ ಸಂಬಂಧಿತ ಗಲಭೆ ಪೀಡಿತ ಗ್ರಾಮಗಳಿಗೆ ಕೇಂದ್ರ ಶಿಕ್ಷಣ ಖಾತೆ ರಾಜ್ಯ ಸಚಿವ, ಪಶ್ಚಿಮ ಬಂಗಾಳ ಬಿಜೆಪಿ ರಾಜ್ಯಾಧ್ಯಕ್ಷ ಡಾ.ಸುಕಾಂತ ಮಜುಂದಾರ್ ಭೇಟಿ ನೀಡಿದರು.

ಜಫ್ರಾಬಾದ್‌ನಲ್ಲಿ ಮೃತ ಹರಗೋವಿಂದ ದಾಸ್ ಮತ್ತು ಚಂದನ್ ದಾಸ್ ಅವರ ಕುಟುಂಬದವರನ್ನೂ ಕೂಡ ಸಚಿವರು ಭೇಟಿ ಮಾಡಿದರು. ಇದೇ ತಿಂಗಳ ೧೨ ರಂದು ಗಲಭೆಯಲ್ಲಿ ಇವರಿಬ್ಬರು ಮೃತಪಟ್ಟಿದ್ದರು. ಈ ಸಂಬಂಧ ಪೊಲೀಸರು ನಾಲ್ವರನ್ನು ಬಂಧಿಸಿದ್ದಾರೆ.

****************

ಉದ್ಯೋಗಿಗಳ ಭವಿಷ್ಯ ನಿಧಿ ಸಂಘಟನೆ-ಇಪಿಎಫ್‌ಒ ಈ ವರ್ಷದ ಫೆಬ್ರವರಿಯ ವೇಳೆಗೆ ಹೆಚ್ಚುವರಿಯಾಗಿ ೧೬ ಲಕ್ಷ ೧೦ ಸಾವಿರ ಸದಸ್ಯರನ್ನು ನೋಂದಾಯಿಸಿದೆ. ಕಳೆದ ವರ್ಷದ ಫೆಬ್ರವರಿಗೆ ಹೋಲಿಸಿದರೆ, ಒಟ್ಟು ಸದಸ್ಯರ ಸಂಖ್ಯೆ ಶೇಕಡ ೪ ರಷ್ಟು ಹೆಚ್ಚಳವಾಗಿದೆ.

ಹೆಚ್ಚಾಗುತ್ತಿರುವ ಉದ್ಯೋಗ ಅವಕಾಶಗಳು, ಉದ್ಯೋಗಿ ಪ್ರಯೋಜನಗಳ ಬಗ್ಗೆ ಹೆಚ್ಚಿದ ಜಾಗೃತಿ, ಇಪಿಎಫ್‌ಒದ ಪರಿಣಾಮಕಾರಿ ಜನಸ್ಪಂದನ ಉಪಕ್ರಮಗಳ ಕಾರಣದಿಂದಾಗಿಯೇ ಸದಸ್ಯರ ಸಂಖ್ಯೆಯಲ್ಲಿ ಏರಿಕೆಯಾಗಲು ಕಾರಣವಾಗಿದೆ ಎಂದು ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ ಹೇಳಿದೆ.

****************

ಮಹಾರಾಷ್ಟ್ರ ಕೇಡರ್ ಪ್ರೊಬೇಷನರಿ ಐಎಎಸ್ ಅಧಿಕಾರಿ ಪೂಜಾ ಖೇಡ್ಕರ್ ವಿರುದ್ಧ ಯಾವುದೇ ಬಲವಂತದ ಕ್ರಮ ಕೈಗೊಳ್ಳಬಾರದು ಎಂಬ ತನ್ನ ಹಿಂದಿನ ಆದೇಶವನ್ನು ಸುಪ್ರೀಂ ಕೋರ್ಟ್, ಮೇ ೨೧ ರವರೆಗೆ ವಿಸ್ತರಿಸಿದೆ.

ನ್ಯಾಯಮೂರ್ತಿಗಳಾದ ಬಿ.ವಿ.ನಾಗರತ್ನ ಮತ್ತು ಎಸ್.ಸಿ.ಶರ್ಮಾ ಅವರಿದ್ದ ನ್ಯಾಯಪೀಠ, ಮೇ ೨ ರಂದು ದೆಹಲಿ ಪೊಲೀಸರ ಮುಂದೆ ವಿಚಾರಣೆಗೆ ಹಾಜರಾಗುವಂತೆ ಪೂಜಾ ಖೇಡ್ಕರ್ ಅವರಿಗೆ ನಿರ್ದೇಶನ ನೀಡಿದೆ. ತನಿಖೆಗೆ ಸಹಕರಿಸದಿದ್ದರೆ ಗಂಭೀರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದೆ.

****************

ಕೋಲ್ಕೊತ್ತಾದ ಈಡನ್ ಗಾರ್ಡನ್ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಹಾಗೂ ಗುಜರಾತ್ ಟೈಟಾನ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಕೋಲ್ಕತ್ತಾ ನೈಟ್ ರೈಡರ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

********ಮುಕ್ತಾಯ********